ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಾಜೀವ್ ಗಾಂಧಿ ನಿಗಮದಿಂದ ಮನೆ ಹಂಚಿಕೆ ಮಾಡಿರುವ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

1059 (1201) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ 5 ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ನೀಡಲಾಗಿದೆ;

(ಆ) ಕಳೆದ 5 ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಮನೆಗಳನ್ನು ನಿರ್ಮಿಸಲು ಫಲಾನುಭವಿಗಳಿಗೆ ನೀಡಲಾದ ಒಟ್ಟು ಮೊತ್ತವೆಷ್ಟು;

(ಇ) ಕಳೆದ 3 ವರ್ಷಗಳಲ್ಲಿ ಗದಗ, ಧಾರವಾಡ ಹಾಗೂ ಹಾವೇರಿ ಜಿಲ್ಲೆಯಲ್ಲಿ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ನಿರ್ಮಿಸಲು ನೀಡಬೇಕಾದ ಸಹಾಯಧನ ಬಾಕಿ ಉಳಿಯಲು ಕಾರಣಗಳೇನು;

(ಈ) ಬಾಕಿ ಮೊತ್ತವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು?